**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ ಇವರ ನಿಯಮ-72ರ ಕ್ರಮಸಂಖ್ಯೆ:154 ಕ್ಕೆ ಮಾನ್ಯ ಮುಖ್ಯಮಂತ್ರಿಯವರ ಉತ್ತರ**

**ವಿಷಯ**

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ 2 ಲಕ್ಷಕ್ಕೂ ಅಧಿಕ ಹುದ್ದೆಗಳು ತೆರವಾಗಿದ್ದು, ಕಳೆದ ಹಲವಾರು ವರ್ಷಗಳಿಂದ ಭರ್ತಿಯಾಗದೆ ಹಾಗೇ ಖಾಲಿ ಉಳಿದಿವೆ. ಈ ರೀತಿ ಬಹುಕಾಲದಿಂದ ಅತೀ ಹೆಚ್ಚಿನ ಹುದ್ದೆಗಳು ಭರ್ತಿಯಾಗದೇ ಹಾಗೇ ಇರುವುದರಿಂದ, ಪ್ರಸ್ತುತ ಎಲ್ಲಾ ಇಲಾಖೆಗಳಲ್ಲಿ ನೌಕರರ ತೀವ್ರ ಕೊರತೆ ಉಂಟಾಗಿ ಸರ್ಕಾರಿ ಕೆಲಸ ಕಾರ್ಯಗಳು ಆಮೆಗತಿಯಲ್ಲಿ ಸಾಗುತ್ತಿರುವುದರ ಜೊತೆಗೆ ಪ್ರಸ್ತುತ ಇರುವ ಸಿಬ್ಬಂದಿಗಳ ಮೇಲೆ ಭರಿಸಲಸಾಧ್ಯವಾದ ಕಾರ್ಯದೊತ್ತಡ ಉಂಟಾಗಿ ಅವರನ್ನು ಮಾನಸಿಕ ಮತ್ತು ದೈಹಿಕ ಸಮಸ್ಯೆಗಳಿಗೆ ಈಡು ಮಾಡುತ್ತಿದೆ.

ಸಕಾಲದಲ್ಲಿ ಮತ್ತು ನಿಯಮಿತವಾಗಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ನೇಮಕಾತಿಗೆ ಸಂಬಂಧಿಸಿದಂತೆ ಸ್ಪಷ್ಟ ಮಾರ್ಗಸೂಚಿಯನ್ನು ರೂಪಿಸಿ, ನಿಯಮಿತವಾಗಿ ಮತ್ತು ಕಾಲಾನುಕಾಲಕ್ಕೆ ನೇಮಕ ಪ್ರಕ್ರಿಯೆಯನ್ನು ನಡೆಸುವ ಶಾಶ್ವತ ನೀತಿಯನ್ನು ಜಾರಿಗೆ ತರಲು ಸರ್ಕಾರ ಇದುವರೆಗೆ ಯಾವುದೇ ಕ್ರಮವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:**

ರಾಜ್ಯ ಸರ್ಕಾರದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ:2,84,881. ಈ ಖಾಲಿ ಹುದ್ದೆಗಳ ಪೈಕಿ ಕೆಲವು ಗ್ರೂಪ್-ಡಿ ಹಾಗೂ ಗ್ರೂಪ್-ಸಿ ವೃಂದಗಳ 96,844 ಹುದ್ದೆಗಳನ್ನು ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದ್ದು, ಒಟ್ಟಾರೆ 1,88,037 ಹುದ್ದೆಗಳು ಖಾಲಿ ಇರುತ್ತವೆ.

ಸಕಾಲದಲ್ಲಿ ಮತ್ತು ನಿಯಮಿತವಾಗಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳನ್ನು ನಿರ್ದಿಷ್ಟ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಅನುವಾಗುವಂತೆ, ಎಲ್ಲಾ ಇಲಾಖೆಗಳು ಪ್ರತಿ ವರ್ಷ ಹುದ್ದೆಗಳನ್ನು ಆಯ್ಕೆ ಪ್ರಾಧಿಕಾರಗಳಿಗೆ ಬಿಡುಗಡೆ ಮಾಡುವ ಕುರಿತು ಹಾಗೂ ನೇಮಕಾತಿ ಪ್ರಾಧಿಕಾರಗಳು ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಅನುವಾಗುವಂತೆ ಅನುಸರಿಸಬೇಕಾದ ವಾರ್ಷಿಕ ವೇಳಾಪಟ್ಟಿ (Calendar of events) ಅನ್ನು ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ **191 ಎಸ್ ಎಲ್ ಎ 2024 (ಭಾಗ-1) ದಿನಾಂಕ:17.01.2025**ರಲ್ಲಿ ನಿಗದಿಪಡಿಸಲಾಗಿದೆ.

ಕಳೆದ 3 ವರ್ಷಗಳಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳ ಮೂಲಕ 8,157 ಹುದ್ದೆಗಳ ನೇಮಕಾತಿಯನ್ನು ಪೂರ್ಣಗೊಳಿಸಲಾಗಿದೆ ಹಾಗೂ 3081 ಹುದ್ದೆಗಳ ನೇಮಕಾತಿಯು ಪ್ರಗತಿಯಲ್ಲಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 01 ಸೆಹಿಮ 2026 ದಿನಾಂಕ: 27-2-2026ರಲ್ಲಿ ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳ ಪೈಕಿ ಸುಮಾರು 56,432 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಮುಂದಿನ 30 ದಿನಗಳಲ್ಲಿ ಪ್ರಾರಂಭಿಸುವಂತೆ ಎಲ್ಲಾ ಇಲಾಖೆಗಳಿಗೆ / ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿದೆ.

**ಕಡತ ಸಂಖ್ಯೆ:ಸಿಆಸುಇ 78 ರಾಸ 2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ